4. ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು ಈ ಮೂಲಕ ಸ್ತ್ರೀ ರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.
5. ಇಲಾಖೆಯಲ್ಲಿ ಖಾಲಿ ಇರುವ 562 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ನೇಮಕಾತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆ ಮುಗಿದ ನಂತರ ಆದ್ಯತಾನುಸಾರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.
6. ವಿಶೇಷ ನೇರ ನೇಮಕಾತಿ ಸಮಿತಿಯ ಮುಖಾಂತರ 5021 ಅರೆವೈದ್ಯಕೀಯ ಹುದ್ದೆಗಳನ್ನು ನೇಮಕಾತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. ಅದು ಪೂರ್ಣಗೊಂಡ ನಂತರ ಆದ್ಯತಾನುಸಾರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುವುದು.
7. ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ 224 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡಲು ಪ್ರಸ್ತಾವನೆ ಸಲ್ಲಿಸಲಾಗಿದೆ.
8. ಪ್ರಸ್ತುತ ಗ್ರೂಪ್-ಡಿ ನೌಕರರ ವೃಂದದಲ್ಲಿ ನೇಮಕಾತಿ ಮಾಡಲು ನಿಷೇಧವಿದ್ದು, ಅವಶ್ಯವಿರುವೆಡೆ ಬಾಹ್ಯ ಮೂಲಗಳಿಂದ ಸೇವೆ ಪಡೆದು ನಿರ್ವಹಿಸಲು ಕ್ರಮವಹಿಸಲಾಗಿದೆ.

ಕೆನೆ ಪದರ ಆದಾಯದ ಮಿತಿ ಹೆಚ್ಚಿಸುವುದು

443 (386) ಶ್ರೀರಾಮಲಿಂಗಾರೆಡ್ಡಿ (ಬಿ.ಟಿ.ಎಂ. ಲೇಔಟ್) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೆನೆಪದರ ಆದಾಯದ ಮಿತಿ ಹೆಚ್ಚಳ ಮಾಡುವಂತೆ ಹಿಂದುಳಿದ ವರ್ಗಗಳ ಆಯೋಗ ಸರ್ಕಾರಕ್ಕೆ ಶಿಫಾರಸ್ಸು ಮಾಡಿದೆಯೇ;

ಆ) ಮಾಡಿದ್ದಲ್ಲಿ ಸರ್ಕಾರ ಆ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳೇನು;

ಇ) ಕೆನೆಪದರ ಆದಾಯ ಮಿತಿಯನ್ನು ನಾಲ್ಕೂವರೆ ಲಕ್ಷಕ್ಕೆ ಹೆಚ್ಚಿಸಲು ಸರ್ಕಾರ ಉದ್ದೇಶಿಸಿದೆಯೇ;

ಈ) ಇಲ್ಲದಿದ್ದಲ್ಲಿ, ಕಾರಣಗಳೇನು?

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು.

ಆ) ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ವಿವರವಾಗಿ ಪರಿಶೀಲಿಸಿದ ನಂತರ ಸೂಕ್ತ ನಿರ್ಧಾರ ಕೈಗೊಳಲಾಗುವುದು.

ಈ) ಉದ್ಭವಿಸುವುದಿಲ್ಲ.

ಬೆಂಗಳೂರು ನಗರದಲ್ಲಿ ಹಿರಿಯ ನಾಗರೀಕರ ಗುರುತಿನ ಚೀಟಿ ವಿತರಣೆಯಲ್ಲಿ ಅವ್ಯವಹಾರ

445 (388) ಶ್ರೀ ರಾಮಲಿಂಗಾ ರೆಡ್ಡಿ (ಬಿ.ಟಿ.ಎಂ. ಲೇಔಟ್) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ 60 ವರ್ಷ ಮೇಲ್ಪಟ್ಟು ಹಿರಿಯ ನಾಗರೀಕರಿಗೆ ಗುರುತಿನ ಚೀಟಿ ನೀಡುವ ಅಧಿಕಾರವನ್ನು ವಿವಿಧ ಸಂಘ ಸಂಸ್ಥೆಗಳಿಗೆ ನೀಡಲಾಗಿದೆಯೇ?

ಆ) ಹಾಗಿದ್ದಲ್ಲಿ, ಎಷ್ಟು ಸಂಘ ಸಂಸ್ಥೆಗಳಿಗೆ ಪರವಾನಗಿ ನೀಡಲಾಗಿದೆ; (ಪೂರ್ತಿ ವಿವರ ನೀಡುವುದು);

ಇ) ಈ ಹಿರಿಯ ನಾಗರೀಕರ ಗುರುತಿನ ಚೀಟಿಗಾಗಿ ಸರ್ಕಾರ ನಿಗದಿಪಡಿಸಿರುವ ಶುಲ್ಕವೆಷ್ಟು;

ಈ) ಈ ಸಂಘ ಸಂಸ್ಥೆಗಳು ಹಿರಿಯ ನಾಗರೀಕರಿಂದ ಅರ್ಜಿಗೆ ರೂ.10/- ಹಾಗೂ ಗುರುತಿನ ಚೀಟಿಗೆ ರೂ.100/ ಗಳನ್ನು ವಸೂಲು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಉ) ಖೊಟ್ಟ ದಾಖಲೆಗಳನ್ನು ಸೃಷ್ಟಿಸಿ 60 ವರ್ಷವಾಗಿಲ್ಲದವರಿಗೂ ಈ ಗುರುತಿನ ಚೀಟಿ ವಿತರಣೆಯಾಗುತ್ತಿರುವುದು ನಿಜವಲ್ಲವೇ;

ಊ) ಸಂಘ ಸಂಸ್ಥೆಗಳಿಗೆ ನೀಡಿರುವ ಪರವಾನಗಿ ರದ್ದುಗೊಳಿಸಿ, ಸರ್ಕಾರದ ಇಲಾಖೆ ಮೂಲಕವೇ ಈ ಗುರುತಿನ ಚೀಟಿ ವಿತರಿಸಲು ಸರ್ಕಾರ ಉದ್ದೇಶಿಸಿದೆಯೇ?